1	2	3	4	5	6	7	8
3.	ಜಿಲ್ಲಾ ಮುಖ್ಯ ರಸ್ತೆ	22551.57	23155.21	17116.91 -	15294.77	25360.23	23452.97

ಇ) ವಿವರಗಳನ್ನು ಅನುಬಂಧ –1 ಹಾಗೂ 2 ರಲ್ಲಿ ಲಗತ್ತಿಸಿದೆ.

ಧಾರವಾಡದಲ್ಲಿ ನ್ಯಾಯಾಲಯ ಕಟ್ಟಡ ನಿರ್ಮಾಣ

3273 (3971) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡದಲ್ಲಿ ಜಿಲ್ಲಾ ನ್ಯಾಯಾಲಯ ಕಟ್ಟಡ ಪ್ರಾರಂಭಿಸಿದ್ದು ಯಾವಾಗ; ಇದಕ್ಕಾಗಿ ಈವರೆಗೆ ವೆಚ್ಚ ಮಾಡಿರುವ ಹಣದ ವಿವರ ನೀಡುವುದು;

ಆ) ಈ ಕಟ್ಟಡ ನಿರ್ಮಾಣ ಕಾಮಗಾರಿ ಯಾವಾಗ ಪೂರ್ಣಗೊಳ್ಳಬೇಕಾಗಿತ್ತು. ಕಟ್ಟಡದ ಕಾಮಗಾರಿ ಪೂರ್ಣಗೊಳ್ಳದೇ ನ್ಯಾಯಾಲಯದ ಕೆಲಸಗಳಿಗೆ ಅಡಚಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕಟ್ಟಡ ಕಾಮಗಾರಿಯ ಎಷ್ಟು ಭಾಗ ಮುಗಿದಿದೆ; ಇನ್ನು ಎಷ್ಟು ಬಾಕಿ ಇದೆ; ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ದಿನಾಂಕ : 7.10.1996 ರಂದು ಈ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. ಈ ಕಾಮಗಾರಿಗೆ ಇದುವರೆವಿಗೂ ರೂ. 388.15 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

ಆ) ಕಟ್ಟಡದ ಕಾಮಗಾರಿ ದಿನಾಂಕ: 6.5.2002 ರಂದು ಪೂರ್ಣಗೊಳ್ಳಬೇಕಾಗಿತ್ತು ಕಟ್ಟಡದ ಕಾಮಗಾರಿ ಪೂರ್ಣಗೊಳ್ಳದೇ ನ್ಯಾಯಾಲಯದ ಕೆಲಸಗಳಿಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಕಟ್ಟಡದ ಕಾಮಗಾರಿಯು ಶೇಕಡ 85 ರಷ್ಟು ಭಾಗ ಪೂರ್ಣಗೊಂಡಿರುತ್ತದೆ. ಇನ್ನೂ ಶೇಕಡ 15 ರಷ್ಟು ಭಾಗ ಮಾತ್ರ ಬಾಕಿ ಇದೆ. ಈ ಕಾಮಗಾರಿಯನ್ನು ಮಾರ್ಚ್ 2004 ರ ಒಳಗೆ ಪೂರ್ಣಗೊಳಿಸಲಾಗುವುದು.

ಧಾರವಾಡ ನಗರದಲ್ಲಿ ಕೇಂದ್ರ ರಸ್ತೆ ನಿಧಿಯಿಂದ ಅನುಷ್ಠಾನಗೊಳ್ಳಬೇಕಾದ ರಸ್ತೆ ಕಾಮಗಾರಿಗಳು

3274 (3972) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡದ ನಗರದ ರಸ್ತೆ ಕಾಮಗಾರಿಗಳನ್ನು ಸಿಆರ್ಎಫ್ ಹಣದಿಂದ ಪ್ರಾರಂಭಿಸಲು ಕೇಂದ್ರಕ್ಕೆ ಕಳುಹಿಸಿರುವ ವಿವರಗಳೇನು;

ಆ) ಪ್ರತಿ ಶಾಸಕರ ಕ್ಷೇತ್ರದಲ್ಲಿ ಸಿಆರ್ಎಫ್ ಹಣದಿಂದ ಈವರೆಗೆ ವಿವಿಧ ಕಾಮಗಾರಿಗಳು ಪೂರ್ಣಗೊಂಡಿರುವ ಹಾಗೂ ಆರಂಭವಾದ ಮತ್ತು ಮಂಜೂರಾದ ಕಾಮಗಾರಿಗಳ ವಿವರಗಳೇನು;

ಇ) ಇಂದಿನ ದಿನಗಳಲ್ಲಿ ಸಿಆರ್‌ಎಫ್ ಹಣದ ಮೂಲಕ ಪ್ರಾರಂಭಿಸಲು ಪ್ರತಿ ಶಾಸಕರ ಕ್ಷೇತ್ರದ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರ ಕೇಂದ್ರಕ್ಕೆ ಕಳುಹಿಸಿರುವ ವಿವರಗಳೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಧಾರವಾಡ ನಗರದ ರಸ್ತೆ ಕಾಮಗಾರಿಗಳನ್ನು ವಿವಿಧ ಯೋಜನೆ ಅಡಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. ಆದುದರಿಂದ ಈ ಕಾಮಗಾರಿಗಳನ್ನು ಪ್ರತ್ಯೇಕವಾಗಿ ಕೇಂದ್ರ ರಸ್ತೆ ನಿಧಿ ಅಡಿಯಲ್ಲಿ ತೆಗೆದುಕೊಳ್ಳಲು ಸಧ್ಯಕ್ಕೆ ಯಾವುದೇ ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.

ಆ) ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಇ) 2003–04 ನೇ ಸಾಲಿನಲ್ಲಿ ಕೇಂದ್ರ ರಸ್ತೆ ನಿಧಿ ಅಡಿಯಲ್ಲಿ ರಾಜ್ಯಸರ್ಕಾರಕ್ಕೆ ನೀಡಬೇಕಾದ ಅನುದಾನವನ್ನು ಇದುವರೆಗೂ ಕೇಂದ್ರ ಸರ್ಕಾರವು ನೀಡದೆ ಇರುವ ಕಾರಣ ಕೇಂದ್ರ ರಸ್ತೆ ನಿಧಿ ಅಡಿಯಲ್ಲಿ ಪ್ರಸ್ತಾವನೆಗಳನ್ನು ಸಿದ್ದಪಡಿಸಿರುವುದಿಲ್ಲ.

ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಕ್ರೀಡಾಂಗಣ ಮಂಜೂರಾತಿ

3275 (3813) : ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೇವಾಡಿ ತಾಲ್ಲೂಕು ಕೇಂದ್ರದಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಂಗಣ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು?

ಇ) ಬಾಗೇವಾಡಿ ಕ್ಷೇತ್ರದಲ್ಲಿ ಬರುವ ಕೋಲಾರ, ಮಸೂತಿ, ಮನಗೋಳಿ ಉಕ್ಕಲಿ, ನಾಸೀಬನಾಳ, ಇಂಗಳೇಶ್ವರ, ಕಾಖಂಡಕಿ, ಮಾದಾಪೂರ ಹಾಗೂ ನಂದಿ ಸಕ್ಕರೆ ಕಾರ್ಖಾನೆ ಸ್ಥಳಗಳಿಗೆ ಗರಡಿ ಮನೆ ಮಂಜೂರು ಮಾಡಲು ಸರ್ಕಾರದ ನಿಲುವೇನು?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು)

ಅ) ಬಂದಿದೆ.

ಆ) ಸೂಕ್ತ ನಿವೇಶನ ದೊರೆತ ನಂತರ

ಇ) ಇದು ಜಿಲ್ಲಾ ಪಂಚಾಯತಿ ಕಾರ್ಯಕ್ರಮವಾಗಿದೆ.

ಬಸವನಬಾಗೇವಾಡಿ ತಾಲ್ಲೂಕಿನಲ್ಲಿ ಬೂದು, ಕಪ್ಪು ಪ್ರದೇಶವೆಂದು ಘೋಷಿಸಿರುವುದು

3276 (3814) : ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನಬಾಗೇವಾಡಿ) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವಿಜಾಪುರ ಜಿಲ್ಲೆಯ ಇಂಡಿ, ವಿಜಾಪುರ, ಬಸವನಬಾಗೇವಾಡಿ ತಾಲ್ಲೂಕುಗಳನ್ನು ಬೂದು, ಕಪ್ಪು ಪ್ರದೇಶವೆಂದು ಘೋಷಿಸಿದ್ದು ರಾಜ್ಯದ 43 ತಾಲ್ಲೂಕುಗಳಿಗೆ ವಿಧಿಸಿರುವ ಬೂದು ಮತ್ತು ಕಪ್ಪು ಪ್ರದೇಶದ ನಿರ್ಬಂಧವನ್ನು ತೆಗೆದುಹಾಕುವ ವಿಚಾರ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ನಿರ್ಬಂಧವನ್ನು ತೆಗೆದು ಹಾಕಲಾಗುವುದು/

ಶ್ರೀ ಬಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು)

ಅ) ಹೌದು.